Akashvani : Bangalore
National Bulletin In Kannada
21.09.2024 : 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
21.09.2024 : 7.35AM
*******

ಮುಖ್ಯಾಂಶಗಳು :

1. ಮೂರು ದಿನಗಳ ಅಮೆರಿಕ ಭೇಟಿಗಾಗಿ ದೆಹಲಿಯಿಂದ ಪ್ರಯಾಣ ಆರಂಭಿಸಿದ ಪ್ರಧಾನಿ ನರೇಂದ್ರ ಮೋದಿ
2. ಆಮ್ ಆದ್ಮಿ ಪಕ್ಷದ ಹಿರಿಯ ನಾಯಕಿ ಅತಿಶಿ ಇಂದು ದೆಹಲಿ ಮುಖ್ಯಮಂತ್ರಿಯಾಗಿ ಪದಗ್ರಹಣ
3. ಶ್ರೀಲಂಕಾದಲ್ಲಿ ಅಧ್ಯಕ್ಷೀಯ ಚುನಾವಣೆ; ವ್ಯಾಪಕ ಬಿಗಿ ಭದ್ರತೆ ನಡುವೆ ಮತದಾನ ಆರಂಭ
4. ಟೆಸ್ಟ್ ಕ್ರಿಕೆಟ್; ಬಾಂಗ್ಲಾದೇಶ ವಿರುದ್ಧದ ಪಂದ್ಯದಲ್ಲಿ ಇಂದು ತನ್ನ ಎರಡನೇ ಇನ್ನಿಂಗ್ಸ್ ಮುಂದುವರಿಸಲಿರುವ ಭಾರತ

**********

ಪ್ರಧಾನಿ ನರೇಂದ್ರ ಮೋದಿ ಮೂರು ದಿನಗಳ ಅಮೆರಿಕ ಪ್ರವಾಸ ಕೈಗೊಂಡಿದ್ದಾರೆ. ಇಂದು ಬೆಳಿಗ್ಗೆ ಅವರು ಪ್ರಯಾಣ ಆರಂಭಿಸಿದರು. ಅವರು ತಮ್ಮ ಪ್ರವಾಸದ ಮೊದಲ ದಿನದಂದು ಡೆಲವಾರೆಯ ವಿಲ್ಮಿಂಗ್ಟನ್‌ನಲ್ಲಿ ನಡೆಯಲಿರುವ ನಾಲ್ಕನೇ ಕ್ವಾಡ್ ನಾಯಕರ ಶೃಂಗಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಇದೇ ಸಂದರ್ಭದಲ್ಲಿ ಅವರು, ವಿಶ್ವದ ಹಲವು ನಾಯಕರೊಂದಿಗೆ ದ್ವಿಪಕ್ಷೀಯ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಪ್ರಧಾನಿಯವರ ಅಮೆರಿಕ ಭೇಟಿಯು ಅನೇಕ ದ್ವಿಪಕ್ಷೀಯ ಮತ್ತು ಬಹುಪಕ್ಷೀಯ ಅಂಶಗಳನ್ನು ಒಳಗೊಂಡಿದೆ. ಪ್ರಧಾನಿಯವರು ಅನೇಕ ವ್ಯಾಪಾರ ಮತ್ತು ಉದ್ಯಮದ ಪ್ರಮುಖರೊಂದಿಗೂ ಮಾತುಕತೆ ನಡೆಸಲಿದ್ದಾರೆ. ಇದಲ್ಲದೆ, ನ್ಯೂಯಾರ್ಕ್‌ನಲ್ಲಿರುವ ಪ್ರಮುಖ ಅಮೆರಿಕನ್ ಕಂಪನಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳೊಂದಿಗೆ ಮಾತುಕತೆ ನಡೆಸುವ ನಿರೀಕ್ಷೆ ಇದೆ. ಮುಂದಿನ ಕ್ವಾಡ್ ನಾಯಕರ ಶೃಂಗಸಭೆ ೨೦೨೫ರಲ್ಲಿ ಭಾರತದ ಆತಿಥ್ಯದಲ್ಲಿ ನಡೆಯಲಿದೆ.

ತಮ್ಮ ಪ್ರವಾಸ ಆರಂಭಕ್ಕೂ ಮುನ್ನ ಹೇಳಿಕೆ ಬಿಡುಗಡೆ ಮಾಡಿರುವ ಪ್ರಧಾನಿ, ಅಮೆರಿಕ ಅಧ್ಯಕ್ಷ ಜೋ ಬೈಡೆನ್, ಆಸ್ಟ್ರೇಲಿಯಾ ಪ್ರಧಾನಿ ಆಂತೋನಿ ಅಲ್ಬನೆಸ್ ಮತ್ತು ಜಪಾನ್ ಪ್ರಧಾನಿ ಫುಮಿಯೋ ಕಿಶಿದಾ ಅವರ ಜೊತೆ ಕ್ವಾಡ್ ಶೃಂಗಸಭೆ ಸಂದರ್ಭದಲ್ಲಿ ದ್ವಿಪಕ್ಷೀಯ ಬಾಂಧವ್ಯ ಬಲವರ್ಧನೆ ಕುರಿತು ಚರ್ಚಿಸಲಾಗುವುದು. ಭಾರತ ಫೆಸಿಫಿಕ್ ವಲಯದಲ್ಲಿ ಶಾಂತಿ, ಪ್ರಗತಿ, ಸಮೃದ್ಧತೆ ತರುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸುವುದಾಗಿ ಹೇಳಿದ್ದಾರೆ. ಅಮೆರಿಕ ಅಧ್ಯಕ್ಷರೊಂದಿಗೆ ನಡೆಯಲಿರುವ ದ್ವಿಪಕ್ಷೀಯ ಸಮಾಲೋಚನೆಯಲ್ಲಿ ಎರಡೂ ದೇಶಗಳು ಹೊಸ ಹಾದಿಯಲ್ಲಿ ಸಾಗಬೇಕಿರುವ ವಲಯಗಳ ಕುರಿತು ಆಳವಾದ ಚರ್ಚೆ ನಡೆಯಲಿದೆ. ಜಾಗತಿಕ ಕಾರ್ಯತಂತ್ರ ಸಹಭಾಗಿತ್ವ ವಲಯದಲ್ಲಿ ಎರಡೂ

ದೇಶಗಳಿಗೂ ಲಾಭವಾಗುವ ಮತ್ತು ಜಾಗತಿಕವಾಗಿ ಉತ್ತಮ ವಾತಾವರಣ ನಿರ್ಮಿಸುವ ಕುರಿತಂತೆ ಚರ್ಚಿಸಲಾಗುವುದು ಎಂದು ಪ್ರಧಾನಿ ಹೇಳಿದ್ದಾರೆ. ನಾಳೆ ಪ್ರಧಾನಮಂತ್ರಿ ಅವರು, ನ್ಯೂಯಾರ್ಕ್‌ನಲ್ಲಿ ಭಾರತೀಯ ಸಮುದಾಯದೊಂದಿಗೆ ಸಂವಾದ ನಡೆಸಲಿದ್ದಾರೆ. ಅತ್ಯಾಧುನಿಕ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ, ಕ್ವಾಂಟೆಮ್ ಕಂಪ್ಯೂಟಿಂಗ್, ಸೆಮಿಕಂಡಕ್ಟರ್ ವಲಯದಲ್ಲಿ ಅಮೆರಿಕದ ಕಂಪನಿಗಳೊಂದಿಗೆ ಸಂವಾದ ನಡೆಸಲಿರುವುದಾಗಿ ತಿಳಿಸಿದ್ದಾರೆ. ಭಾರತೀಯ ಸಮುದಾಯ ಮತ್ತು ಅಮೆರಿಕ ಉದ್ದಿಮೆದಾರರೊಂದಿಗೆ ಚರ್ಚೆಯನ್ನು ತಾವು ಎದುರು ನೋಡುತ್ತಿರುವುದಾಗಿ ತಿಳಿಸಿದ್ದಾರೆ. ಬಳಿಕ ನರೇಂದ್ರ ಮೋದಿ ಅವರು, ವಿಶ್ವಸಂಸ್ಥೆಯ ಸಾಮಾನ್ಯ ಅಧಿವೇಶನದಲ್ಲಿ ಭವಿಷ್ಯದ ಶೃಂಗಸಭೆ ವಿಷಯ ಕುರಿತು ಭಾಷಣ ಮಾಡಲಿದ್ದಾರೆ. ಉತ್ತಮ ನಾಳೆಗಾಗಿ ಬಹುಹಂತದ ಪರಿಹಾರ ಎಂಬುದು ಈ ಶೃಂಗಸಭೆಯ ಧ್ಯೇಯ ವಾಕ್ಯವಾಗಿದೆ.

**********

ಆಮ್ ಆದ್ಮಿ ಪಕ್ಷದ ಹಿರಿಯ ನಾಯಕಿ ಅತಿಶಿ ಇಂದು ದೆಹಲಿ ಮುಖ್ಯಮಂತ್ರಿಯಾಗಿ ಪದಗ್ರಹಣ ಮಾಡಲಿದ್ದಾರೆ. ಉಪರಾಜ್ಯಪಾಲ, ಲೆಫ್ಟಿನೆಂಟ್ ಜನರಲ್ ವಿ.ಕೆ. ಸಕ್ಸೇನಾ ಅವರು ಮುಖ್ಯಮಂತ್ರಿ ಹಾಗೂ ಮಂತ್ರಿಮಂಡಲ ಸದಸ್ಯರಿಗೆ ಗೌಪ್ಯತಾ ಪ್ರತಿಜ್ಞಾ ವಿಧಿ ಬೋಧಿಸಲಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಅತಿಶಿ ಅವರನ್ನು ನಿಯೋಜಿತ ಮುಖ್ಯಮಂತ್ರಿಯಾಗಿ ನೇಮಿಸಿದ್ದಾರೆ. ಬಿಜೆಪಿಯ ಸುಷ್ಮಾ ಸ್ವರಾಜ್, ಕಾಂಗ್ರೆಸ್‌ನ ಶೀಲಾ ದೀಕ್ಷಿತ್ ನಂತರ ಮೂರನೇ ಮಹಿಳಾ ಮುಖ್ಯಮಂತ್ರಿಯಾಗಿ ಅವರು ಇಂದಿನಿಂದ ಕಾರ್ಯಾರಂಭ ಮಾಡಲಿದ್ದಾರೆ.

**********

ಕೇಂದ್ರ ಗೃಹ ಸಚಿವ ಮತ್ತು ಬಿಜೆಪಿ ಹಿರಿಯ ನಾಯಕ ಅಮಿತ್ ಷಾ ಇದೇ ತಿಂಗಳ ೨೪ ರಂದು ೨ ದಿನಗಳ ಮಹಾರಾಷ್ಟ್ರ ಪ್ರವಾಸ ಕೈಗೊಳ್ಳಲಿದ್ದಾರೆ. ಪ್ರವಾಸದ ಮೊದಲ ದಿನ ಅವರು, ನಾಗ್ಪುರ ಮತ್ತು ಛತ್ರಪತಿ ಸಂಭಾಜಿನಗರದ ಪಕ್ಷದ ಪದಾಧಿಕಾರಿಗಳೊಂದಿಗೆ ಮಾತುಕತೆ ನಡೆಸಲಿದ್ದಾರೆ. ೨೫ರಂದು ಅವರು ನಾಸಿಕ್ ಮತ್ತು ಕೋಲ್ಹಾಪುರಕ್ಕೆ ಭೇಟಿ ನೀಡಲಿದ್ದಾರೆ ಎಂದು ರಾಜ್ಯ ಬಿಜೆಪಿ ಮುಖ್ಯಸ್ಥರಾದ ಚಂದ್ರಶೇಖರ್ ಭವಂಕುಲೆ ತಿಳಿಸಿದ್ದಾರೆ. ಅಮಿತ್ ಷಾ ಅವರ ಭೇಟಿ ಪಕ್ಷದ ಕಾರ್ಯಕರ್ತರ ಹುಮ್ಮಸ್ಸನ್ನು ಹೆಚ್ಚಿಸಲಿದ್ದು, ಮುಂಬರುವ ವಿಧಾನಸಭಾ ಚುನಾವಣೆಗೆ ಪೂರಕ ವಾತಾವರಣ ಸೃಷ್ಟಿಯಾಗಲಿದೆ ಎಂದು ಅವರು ತಿಳಿಸಿದ್ದಾರೆ.

**********

ಮಲಯಾಳಂನ ಖ್ಯಾತ ರಂಗಭೂಮಿ ಹಾಗೂ ಚಲನಚಿತ್ರ ನಟಿ ಕಾವಿಯೂರು ಪೊನ್ನಮ್ಮ ನಿಧನರಾಗಿದ್ದಾರೆ. ರಂಗಭೂಮಿ ಹಾಗೂ ಚಲನಚಿತ್ರ ವಲಯಕ್ಕೆ ಅವರು ಅಮೋಘ ಕೊಡುಗೆ ನೀಡಿದ್ದು, ಅವರ ನಿಧನಕ್ಕೆ ಕೇರಳ ಚಿತ್ರರಂಗದ ಗಣ್ಯರು ಕಂಬನಿ ಮಿಡಿದಿದ್ದಾರೆ.

**********

ತಿರುಪತಿ ಲಡ್ಡುವಿನಲ್ಲಿ ಕಲಬೆರಕೆ ಮಾಡಲಾಗಿದೆ ಎಂಬ ಆಪಾದನೆ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಆಂಧ್ರಪ್ರದೇಶ ಸರ್ಕಾರದಿಂದ ವರದಿ ಕೇಳಿದೆ. ನವದೆಹಲಿಯಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಪ್ರಶ್ನೆಗಳಿಗೆ ಉತ್ತರಿಸಿದ ಕೇಂದ್ರ ಆರೋಗ್ಯ ಸಚಿವ ಜಗತ್ ಪ್ರಕಾಶ್ ನಡ್ಡಾ, ಈ ಕುರಿತು ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್ ಚಂದ್ರಬಾಬು ನಾಯ್ಡು ಅವರೊಂದಿಗೆ ಮಾತನಾಡಿ, ವರದಿ ಕೇಳಲಾಗಿದೆ. ಈ ಬಗ್ಗೆ ಸರ್ಕಾರ ಪರಿಶೀಲನೆ ನಡೆಸಿ ಸೂಕ್ತ ಕ್ರಮಕೈಗೊಳ್ಳಲಿದೆ ಎಂದರು. ಕೇಂದ್ರ ಗ್ರಾಹಕ ವ್ಯವಹಾರ, ಆಹಾರ ಮತ್ತು ಸಾರ್ವಜನಿಕ ವಿತರಣೆ ಖಾತೆ ಸಚಿವ ಪ್ರಹ್ಲಾದ್ ಜೋಶಿ ಸುದ್ದಿಗಾರರೊಂದಿಗೆ ಮಾತನಾಡಿ, ಈ ಬಗ್ಗೆ ವಿವರವಾದ ತನಿಖೆ ನಡೆಯಬೇಕು ಮತ್ತು ತಪ್ಪಿತಸ್ಥರಿಗೆ ಶಿಕ್ಷೆಯಾಗಬೇಕು ಎಂದರು. ಆಹಾರ ಸಂಸ್ಕರಣಾ ಕೈಗಾರಿಕಾ ಖಾತೆ ಸಚಿವ ಚಿರಾಗ್ ಪಾಸ್ವಾನ್, ಆಹಾರ ಕಲಬೆರಕೆಯಲ್ಲಿ ತೊಡಗಿರುವ ಯಾರನ್ನೂ ಬಿಡಲಾಗುವುದಿಲ್ಲ ಎಂದರು. ಈ ಮಧ್ಯೆ ತಿರುಪತಿಯ ದೇವಸ್ಥಾನದಲ್ಲಿ ಪ್ರಸಾದವಾಗಿ ನೀಡುವ ಲಡ್ಡುಗಳ ತಯಾರಿಕೆಯಲ್ಲಿ ಬಳಸುವ ತುಪ್ಪದಲ್ಲಿ ಪ್ರಾಣಿಗಳ ಕೊಬ್ಬು ಇರುವುದನ್ನು ರಾಷ್ಟ್ರೀಯ ಡೈರಿ ಅಭಿವೃದ್ಧಿ ಮಂಡಳಿಯ ಪ್ರಯೋಗಾಲಯವಾದ ಜಾನುವಾರು ಮತ್ತು ಆಹಾರದ ವಿಶ್ಲೇಷಣೆ ಮತ್ತು ಕಲಿಕೆಯ ಕೇಂದ್ರವು ದೃಢಪಡಿಸಿದೆ. ಆಂಧ್ರಪ್ರದೇಶ ಮುಖ್ಯಮಂತ್ರಿ ಎಂ.ಚಂದ್ರಬಾಬು ನಾಯ್ಡು ಅವರು, ಅಮರಾವತಿಯಲ್ಲಿಂದು ಈ ಕುರಿತಂತೆ ಹಿರಿಯ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದರು.

**********

ಕರ್ನಾಟಕ ರಾಜ್ಯ ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಗೆ ಒಳಪಡುವ ದೇವಾಲಯಗಳಲ್ಲಿ ಪ್ರಸಾದ ತಯಾರಿಕೆಗೆ ಮತ್ತು ಇನ್ನಿತರ ದಾಸೋಹದಲ್ಲಿ ಶುದ್ಧ ನಂದಿನಿ ತುಪ್ಪ ಬಳಸುವಂತೆ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಈ ಕುರಿತು ರಾಜ್ಯ ಧಾರ್ಮಿಕ ದತ್ತಿ ಇಲಾಖೆ ಹೊರಡಿಸಿರುವ ಆದೇಶದಲ್ಲಿ ದೇವಾಲಯಗಳಲ್ಲಿ ಸೇವೆಗಳಿಗೆ ದೀಪಗಳಿಗೆ ಮತ್ತು ಎಲ್ಲ ವಿಧದ ಪ್ರಸಾದ ತಯಾರಿಕೆಗೆ ಹಾಗೂ ದಾಸೋಹ ಭವನದಲ್ಲಿ ಕಡ್ಡಾಯವಾಗಿ ನಂದಿನಿ ತುಪ್ಪವನ್ನು ಮಾತ್ರ ಬಳಸುವಂತೆ ಸೂಚಿಸಲಾಗಿದೆ. ಜೊತೆಗೆ ಪ್ರಸಾದ ತಯಾರಿಕೆಯಲ್ಲಿ ಗುಣಮಟ್ಟ ಕಾಪಾಡಿಕೊಳ್ಳುವಂತೆ ರಾಜ್ಯದ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

**********

ಶ್ರೀಲಂಕಾದಲ್ಲಿ ಅಧ್ಯಕ್ಷೀಯ ಚುನಾವಣೆಗೆ ಮತದಾನ ಪ್ರಗತಿಯಲ್ಲಿದೆ. ಇಂದು ಬೆಳಗ್ಗೆ ೭ ಗಂಟೆಯಿಂದ ಮತದಾನ ಆರಂಭವಾಗಿದ್ದು, ಮತದಾರರು ಉತ್ಸಾಹಭರಿತರಾಗಿ ತಮ್ಮ ಹಕ್ಕು ಚಲಾಯಿಸುತ್ತಿದ್ದಾರೆ. ೧೭ ದಶಲಕ್ಷಕ್ಕೂ ಅಧಿಕ ಮತದಾರರು ದ್ವೀಪ ರಾಷ್ಟ್ರದ ೯ನೇ ಕಾರ್ಯಕಾರಿ ಅಧ್ಯಕ್ಷರನ್ನು ಚುನಾಯಿಸಲಿದ್ದಾರೆ. ೨೦೨೨ರ ಆರ್ಥಿಕ ಹಿಂಜರಿತದ ನಂತರ ಶ್ರೀಲಂಕಾದಲ್ಲಿ ನಡೆಯುತ್ತಿರುವ ಮೊದಲ ಚುನಾವಣೆ ಇದಾಗಿದೆ. ೧೩ ಸಾವಿರದ ೪೦೦ಕ್ಕೂ ಅಧಿಕ ಮತಗಟ್ಟೆಗಳಲ್ಲಿ ಇಂದು ಸಂಜೆ ೪.೩೦ರ ವರೆಗೆ ಮತದಾನ ನಡೆಯಲಿದೆ. ೬೦ ಸಾವಿರಕ್ಕೂ ಅಧಿಕ ಪೊಲೀಸ್ ಸಿಬ್ಬಂದಿಯನ್ನು ಭದ್ರತೆಗೆ ನಿಯೋಜಿಸಿದ್ದು, ೧೧೬ ಅಂತಾರಾಷ್ಟ್ರೀಯ ವೀಕ್ಷಕರ ಸಮ್ಮುಖದಲ್ಲಿ ಚುನಾವಣೆ ನಡೆಯುತ್ತಿದೆ. ೩೮

ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಹಾಲಿ ಅಧ್ಯಕ್ಷ ರಣಿಲ್ ವಿಕ್ರಮ ಸಿಂಘೆ ಹಾಗೂ ಪ್ರತಿಪಕ್ಷ ನಾಯಕ ಸಜಿತ್ ಪ್ರೇಮದಾಸ ಮತ್ತು ಎಡಪಂಥೀಯ ನಾಯಕ ಅರುಣಕುಮಾರ ದಿಸ್ಸಾನಾಯ್ಕೆ ಅವರು ಪ್ರಮುಖ ಹುರಿಯಾಳುಗಳಾಗಿದ್ದಾರೆ.

**********

ಇದೇ ತಿಂಗಳ ೨೫ ಮತ್ತು ೨೬ ರಂದು ನಡೆಯಲಿರುವ ಕೇಂದ್ರಾಡಳಿತ ಪ್ರದೇಶ ಜಮ್ಮು ಮತ್ತು ಕಾಶ್ಮೀರ ೨ ನೇ ಹಂತದ ಚುನಾವಣೆ ಸಿದ್ಧತೆ ಭರದಿಂದ ಸಾಗಿದೆ. ಈ ಹಂತದಲ್ಲಿ ೬ ಜಿಲ್ಲೆಗಳ ೨೬ ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ. ೨ ನೇ ಹಂತದಲ್ಲಿ ಮತದಾನ ನಡೆಯಲಿರುವ ಶ್ರೀನಗರ ಜಿಲ್ಲೆಯ ಹಬ್ಬಾ ಕಡಲ್ ಮತಕ್ಷೇತ್ರ  ಅತ್ಯಂತ ಪ್ರಮುಖ ಕ್ಷೇತ್ರಗಳಲ್ಲಿ ಒಂದಾಗಿದೆ. ಹಬ್ಬಾ ಕಡಲ್ ಕ್ಷೇತ್ರದಲ್ಲಿ ಅತಿ ಹೆಚ್ಚಿನ ಅಭ್ಯರ್ಥಿಗಳು ಸ್ಪರ್ಧಿಸುತ್ತಿದ್ದು, ಇದು ರೋಚಕ ಕಣವಾಗಿ ಮಾರ್ಪಟ್ಟಿದೆ. ಹಬ್ಬಾ ಕಡಲ್‌ನಲ್ಲಿ ನ್ಯಾಷನಲ್ ಕಾನ್ಫರೆನ್ಸ್, ಪೀಪಲ್ಸ್ ಡೆಮಾಕ್ರೆಟಿಕ್ ಪಾರ್ಟಿ, ಭಾರತೀಯ ಜನತಾ ಪಕ್ಷ ಮತ್ತು ಇನ್ನಿತರ ಪಕ್ಷಗಳ ಒಟ್ಟು ೧೬ ಅಭ್ಯರ್ಥಿಗಳು ಕಣದಲ್ಲಿರುವುದಾಗಿ ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.  ಇದೇ ವೇಳೆ ಜಮ್ಮು ಕಾಶ್ಮೀರದಲ್ಲಿ ಬುಧವಾರ ನಡೆದ ಮತದಾನದಲ್ಲಿ ಪ್ರತಿಶತ ೬೧.೩೮ ಜನರು ಮತದಾನದಲ್ಲಿ ಪಾಲ್ಗೊಂಡಿದ್ದರು ಎಂದು ಚುನಾವಣಾ ಆಯೋಗ ತಿಳಿಸಿದೆ. ಒಟ್ಟು ಮತದಾನದಲ್ಲಿ ಶೇಕಡ ೬೩.೭೫ ಪುರುಷರು, ಶೇಕಡ ೫೮.೯೬ ಮಹಿಳೆಯರು ಮತ್ತು ಶೇಕಡ ೪೦ ರಷ್ಟು ತೃತೀಯ ಲಿಂಗಿಗಳು ತಮ್ಮ ಮತದಾನದ ಹಕ್ಕು ಚಲಾಯಿಸಿದ್ದಾರೆ. ಕಳೆದ ೩೫ ವರ್ಷಗಳಲ್ಲಿ ಜಮ್ಮು ಕಾಶ್ಮೀರದಲ್ಲಿ ದಾಖಲಾದ ಅತಿ ಹೆಚ್ಚಿನ ಮತದಾನ ಇದಾಗಿದೆ.

**********

ಅಮೆರಿಕ ಅಧ್ಯಕ್ಷೀಯ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಅವರ ಮೇಲೆ ಎರಡನೇ ಬಾರಿ ಗುಂಡಿನ ದಾಳಿಯ ವಿಫಲ ಯತ್ನ ನಡೆದ ಹಿನ್ನೆಲೆಯಲ್ಲಿ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಲಿರುವ ಅಭ್ಯರ್ಥಿಗಳಿಗೆ ಭದ್ರತೆ ಹೆಚ್ಚಿಸಲು ಅಮೆರಿಕದ ಜನಪ್ರತಿನಿಧಿಗಳ ಸಭೆ ಸರ್ವಾನುಮತದಿಂದ ನಿರ್ಣಯ ಕೈಗೊಂಡಿದೆ. ಸಭೆಯಲ್ಲಿ ಹಾಜರಿದ್ದ ಎಲ್ಲ ೪೦೫ ಸದಸ್ಯರು ಈ ನಿರ್ಣಯದ ಪರವಾಗಿ ಮತ ಚಲಾಯಿಸಿದ್ದಾರೆ. ನವೆಂಬರ್‌ನಲ್ಲಿ ನಡೆಯಲಿರುವ ಚುನಾವಣಾ ಸಂದರ್ಭದಲ್ಲಿ ವ್ಯಾಪಕ ಬಿಗಿ ಭದ್ರತೆ ಕೈಗೊಳ್ಳಲು ನಿರ್ಧರಿಸಲಾಗಿದೆ. ಅಮೆರಿಕದಲ್ಲಿ ಭದ್ರತಾ ಲೋಪಕ್ಕೆ ಅಮೆರಿಕ ಗುಪ್ತದಳ ಸೇವಾ ವಿಭಾಗದ ವೈಫಲ್ಯವೇ ಕಾರಣ ಎಂದು ವರದಿಗಳು ತಿಳಿಸಿವೆ.

**********

ಚೆನ್ನೈನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮೊದಲ ಟೆಸ್ಟ್‌ಕ್ರಿಕೆಟ್ ಪಂದ್ಯದಲ್ಲಿ ಬಾಂಗ್ಲಾದೇಶ ವಿರುದ್ಧ ಎರಡನೇ ಇನ್ನಿಂಗ್ಸ್ ಆಡುತ್ತಿರುವ ಭಾರತ, ನಿನ್ನೆ ದಿನದಾಟದ ಮುಕ್ತಾಯಕ್ಕೆ ಒಟ್ಟು ೩೦೮ ರನ್‌ಗಳ ಮುನ್ನಡೆ ಪಡೆದಿದೆ.ಇಂದು ಎರಡನೇ ಇನ್ನಿಂಗ್ಸ್ ಆಟವನ್ನು ಭಾರತ ಮುಂದುವರಿಸಲಿದೆ.  ಬೆಳಗ್ಗೆ ನಿನ್ನೆಯ ೬ ವಿಕೆಟ್ ನಷ್ಟಕ್ಕೆ ೩೩೯ ರನ್‌ಗಳಿಂದ ಮೊದಲ ಇನ್ನಿಂಗ್ಸ್‌ನ

ಆಟ ಮುಂದುವರಿಸಿದ ಭಾರತ, ೩೭ ರನ್ ಸೇರಿಸುವಷ್ಟರಲ್ಲಿ ಕೊನೆಯ ೪ ವಿಕೆಟ್ ಕಳೆದುಕೊಂಡಿತು. ಬಾಂಗ್ಲಾದೇಶ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೧೪೯ ರನ್ ಗಳಿಗೆ ಆಲ್‌ಔಟ್ ಆಯಿತು. ಎರಡನೇ ಇನ್ನಿಂಗ್ಸ್‌ನಲ್ಲಿ ಭಾರತ ಆರಂಭಿಕ ಹಂತದಲ್ಲೇ ಮೂರು ವಿಕೆಟ್‌ಗಳನ್ನು ಕಳೆದುಕೊಂಡಿದೆ. ಶುಭ್‌ಮನ್ ಗಿಲ್ ೩೩ ಹಾಗೂ ರಿಷಭ್ ಪಂತ್ ೧೨ ರನ್‌ಗಳಿಸಿ ಆಡುತ್ತಿದ್ದಾರೆ.

*********